**ಕರ್ನಾಟಕ ಸರ್ಕಾರ**

ಸಂಖ್ಯೆ: ಆಕುಕ 52 ಪಿಐಎಂ 2020/ಇ೩.

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ:20.10.2020

## ಅಧಿಸೂಚನೆ

ವಿಷಯ: ಆಯುಷ್ ಇಲಾಖೆಯ ಸಹಾಯಕ ಔಷಧ ನಿಯಂತ್ರಕರು ಹಾಗೂ ಉಪ ಔಷಧ ನಿಯಂತ್ರಕರು ವೃಂದದಲ್ಲಿ ದಿನಾಂಕ:19.04.2012 ಹಾಗೂ ದಿ: 07.04.2016 ರಿಂದ ದಿನಾಂಕ:31.12.2019ರ ವರೆಗಿನ ಅವಧಿಗೆ ದಿನಾಂಕ:01.01.2020 ರಲ್ಲಿದ್ದಂತೆ **ಅಂತಿಮ ಜೇಷ್ಠತಾ ಪಟ್ಟಿಯನ್ನು** ಪ್ರಕಟಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 186 ಎಸ್.ಆರ್.ಎಸ್. 2018, ದಿನಾಂಕ: 27.02.2019.
2. ಸರ್ಕಾರದ ಆದೇಶದ ಸಂಖ್ಯೆ: ಸಿಆಸುಇ 186 ಎಸ್.ಆರ್.ಎಸ್. 2018, ದಿನಾಂಕ: 15.05.2019.
3. ಅಧಿಸೂಚನೆ ಸಂಖ್ಯೆ: ಆಕುಕ 52 ಪಿಐಎಂ 2020, ದಿನಾಂಕ: 24.08.2020
4. ಆಯುಷ್ ಇಲಾಖೆಯ ಪತ್ರ ಸಂಖ್ಯೆ:ಆಯುಷ್/52/ಸಿಬ್ಬಂದಿ(8)/2020, ದಿನಾಂಕ: 24.09.2020.

******

ಶ್ರೀ. ಬಿ.ಕೆ.ಪವಿತ್ರ ಮತ್ತು ಇತರರು ವಿರುದ್ಧ ಯೂನಿಯನ್ ಆಫ್ ಇಂಡಿಯಾ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲ್ ಸಂಖ್ಯೆ: 2368/2011 ಮತ್ತು ಇತರ ಸಿವಿಲ್ ಅಪೀಲುಗಳಲ್ಲಿ ದಿನಾಂಕ: 09.02.2017 ರಂದು ನೀಡಿರುವ ತೀರ್ಪಿನಲಿ ಕರ್ನಾಟಕ (ರಾಜ್ಯದ ಸಿವಿಲ್ ಸೇವೆಗಳಲ್ಲಿಯ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿದ ಸರ್ಕಾರಿ ನೌಕರರ ಜೇಷ್ಠತೆಯ ನಿರ್ಧರಣಾ ಅಧಿನಿಯಮ, 2002ರ ಪ್ರಕರಣ 3 ಮತ್ತು 4 ನ್ನು ಸಂವಿಧಾನದ ಅನುಚ್ಛೇದ-14 ಮತ್ತು 16ಕ್ಕೆ ಅಧಿಕಾರಾತೀತ (Ultra vires Articles 14 and 16 of the Constitution) ಎಂದು ಆದೇಶಿಸಿರುತ್ತದೆ.

......2

1850966/2020/O/o COMM-AYUSH

ಈ ಹಿನ್ನೆಲೆಯಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು) ವಿಭಾಗವು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 182 ಎಸ್.ಆರ್.ಆರ್. 2011, ದಿನಾಂಕ: 06.05.2017ರ ಮಾರ್ಗಸೂಚಿಗಳನುಸಾರ ಮುಂಬಡ್ತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರಿಗೆ ಮೀಸಲಾತಿ ಅನುಸರಿಸಿರುವ ಎಲ್ಲಾ ವೃಂದಗಳ ಜೇಷ್ಠತಾ ಪಟ್ಟಿಗಳನ್ನು ಪರಿಷ್ಕರಿಸಲು ಆದೇಶಿಸಿರುತ್ತದೆ.

ಅಂತೆಯೇ, ದಿನಾಂಕ:06.05.2017ರ ಸರ್ಕಾರದ ಆದೇಶದಲ್ಲಿ ನೀಡಿರುವ ಮಾರ್ಗಸೂಚಿಗಳನುಸಾರ ಮುಂಬಡ್ತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ನೌಕರರಿಗೆ ಮೀಸಲಾತಿ ಅನುಸರಿಸಿರುವ ಈ ವೃಂದದ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಿ, ಅಂತಿಮ ಜೇಷ್ಠತಾ ಪಟ್ಟಿಯನ್ನು ಸರ್ಕಾರಿ ಅಧಿಸೂಚನೆ ಸಂಖ್ಯೆ: ಆಕುಕ 23 ಪಿಐಎಂ 2018, ದಿನಾಂಕ: 16.04.2018ರಂದು ಹೊರಡಿಸಲಾಗಿದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲ್ ಸಂಖ್ಯೆ: 2368/2011- ಶ್ರೀ ಬಿ.ಕೆ.ಪವಿತ್ರ ಮತ್ತು ಇತರರು ವಿರುದ್ಧ ಕೇಂದ್ರ ಸರ್ಕಾರ ಮತ್ತು ಇತರರು ಮತ್ತು ಸಂಬಂಧಿಸಿದ ರಿವ್ಯೂ ಅರ್ಜಿ ಹಾಗೂ ರಿಟ್ ಅರ್ಜಿಗಳಲ್ಲಿನ ಪ್ರಕರಣ ಎಂ.ಎ.ಸಂಖ್ಯೆ: 1151/2018ರಲ್ಲಿ ದಿನಾಂಕ: 10.05.2019ರಂದು ನೀಡಿದ ತೀರ್ಪಿನಲ್ಲಿ ಕರ್ನಾಟಕ ರಾಜ್ಯ ಪತ್ರದಲ್ಲಿ ದಿನಾಂಕ: 23.06.2018 ರಂದು ಪ್ರಕಟಿಸಲಾದ ಕರ್ನಾಟಕ (ರಾಜ್ಯದ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ) ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ, 2017ರ ಸಂವಿಧಾನಿಕ ಸಿಂಧುತ್ವವನ್ನು ಎತ್ತಿಹಿಡಿದಿರುವುದರಿಂದ, 2017ರ ಅಧಿನಿಯಮದನ್ವಯ ಕ್ರಮ ತೆಗೆದುಕೊಳ್ಳುವ ಬಗ್ಗೆ ಉಲ್ಲೇಖ (1) ಮತ್ತು (2)ರ ಸರ್ಕಾರದ ಆದೇಶಗಳಲ್ಲಿ ಸೂಚನೆಗಳನ್ನು ನೀಡಲಾಗಿರುತ್ತದೆ.

2017ರ ಅಧಿನಿಯಮದ ಸೆಕ್ಷನ್ 4ರಲ್ಲಿ "ಈ ಅಧಿನಿಯಮದಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ಮೀಸಲಾತಿ ಆದೇಶದಲ್ಲಿ ಉಪಬಂಧಿಸಲಾದಂತೆ ಬಡ್ತಿಯಲ್ಲಿ ಮೀಸಲಾತಿ ಆದೇಶದ ನೀತಿಗೆ ಅನುಸಾರವಾಗಿ ಸಾವಿರದ ಒಂಭೈನೂರ ಎಪ್ಪತ್ತೆಂಟರ ಏಪ್ರಿಲ್ ಇಪ್ಪತ್ತೇಳನೇ ದಿನಾಂಕದಿಂದ ಜಾರಿಗೆ ಬರುವಂತೆ ಬಡ್ತಿ ಹೊಂದಿದ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ಸರ್ಕಾರಿ ನೌಕರರಿಗೆ ಈಗಾಗಲೇ ನೀಡಲಾಗಿರುವ ತತ್ಪರಿಣಾಮ ಜೇಷ್ಠತೆಯು ಸಿಂಧುವಾಗಿರತಕ್ಕದ್ದು ಮತ್ತು ಅದನ್ನು ಸಂರಕ್ಷಿಸತಕ್ಕದ್ದು ಹಾಗೂ ಅದನ್ನು ಭಂಗಗೊಳಿಸತಕ್ಕದ್ದಲ್ಲ" ಎಂದು ತಿಳಿಸಿದೆ.

ಈ ಹಿನ್ನೆಲೆಯಲ್ಲಿ ಉಲ್ಲೇಖ (2)ರ ಅದೇಶದಲ್ಲಿ ಉಲ್ಲೇಖ (1)ರ ಆದೇಶದ ಕಂಡಿಕೆ-8ರ ಉಪಖಂಡಿಕೆ (2)ರಲ್ಲಿ ಉಲ್ಲೇಖಿಸಲಾದ, ಕರ್ನಾಟಕ ರಾಜ್ಯ ಸಿವಿಲ್ ಸೇವಾ (ಮುಂಬಡ್ತಿ ವೇತನ ಮತ್ತು ಪಿಂಚಣಿಗಳ ಕ್ರಮಬದ್ಧತೆ) ಅಧಿನಿಯಮ, 1973ರ ಸೆಕ್ಷನ್ 4,5 ಮತ್ತು 6ನ್ನು ಸೆಕ್ಷನ್ 9 ರೊಡನೆ ಸಹವಾಚನ ಮಾಡಿಕೊಂಡು, ಇವುಗಳನ್ವಯ ತಾತ್ಕಾಲಿಕ /ಅಂತಿಮ ಜೇಷ್ಠತಾ ಪಟ್ಟಿಗಳನ್ನು ತಯಾರಿಸಿ ಪ್ರಕಟಿಸುವ, ಅರ್ಹತಾ ದಿನಾಂಕಗಳನ್ನು ನಿಗದಿಪಡಿಸುವ, ಮುಂಬಡ್ತಿಗಳನ್ನು ಪುನರಾವಲೋಕನೆ ಮಾಡುವ, ವೇತನ ಮತ್ತು ಪಿಂಚಣಿಗಳನ್ನು ನಿಗದಿಪಡಿಸುವುದನ್ನು ಒಳಗೊಂಡ ಪ್ರಕ್ರಿಯೆಯನ್ನು ಗರಿಷ್ಠ 30 ದಿನಗಳೊಳಗಾಗಿ ಪೂರ್ಣಗೊಳಿಸತಕ್ಕದ್ದು ಎಂದು ತಿಳಿಸಿದೆ.

ಅದರಂತೆ, ಉಲ್ಲೇಖ (3)ರ ಅಧಿಸೂಚನೆಯಲ್ಲಿ ಹೊರಡಿಸಿರುವ ಆಯುಷ್ ಇಲಾಖೆಯ ಸಹಾಯಕ ಔಷಧ ನಿಯಂತ್ರಕರು ಹಾಗೂ ಉಪ ಔಷಧ ನಿಯಂತ್ರಕರು ವೃಂದದ ಜೇಷ್ಠತೆಯನ್ನು ಪುನರಾವಲೋಕಿಸಿ, ಉಲ್ಲೇಖ (1) ಮತ್ತು (2)ರ ಸರ್ಕಾರದ ಆದೇಶಗಳ ಹಿನ್ನೆಲೆಯಲ್ಲಿ ಪುನರಾವಲೋಕಿಸಿ, ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿ, ಈ ಬಗ್ಗೆ ಆಕ್ಷೇಪಣೆ /ಸಲಹೆಗಳನ್ನು ಸಲ್ಲಿಸಲು 15 ದಿನಗಳ ಕಾಲಾವಕಾಶವನ್ನು ನೀಡಲಾಗಿತ್ತು.

ಉಲ್ಲೇಖ (4)ರ ಪತ್ರದಲ್ಲಿ, ಆಯುಕ್ತರು, ಆಯುಷ್ ಇಲಾಖೆ ಇವರು ಆಯುಷ್ ಇಲಾಖೆಯ ಸಹಾಯಕ ಔಷಧ ನಿಯಂತ್ರಕರು ಹಾಗೂ ಉಪ ಔಷಧ ನಿಯಂತ್ರಕರು ವೃಂದದ ದಿನಾಂಕ:19.04.2012 ಹಾಗೂ 07.04.2016 ರಿಂದ ದಿನಾಂಕ:31.12.2019ರ ಅವಧಿಗೆ ದಿನಾಂಕ: 01.01.2020ರಲ್ಲಿರುವಂತೆ, ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಯಾವುದೇ ಆಕ್ಷೇಪಣೆಗಳು ಸ್ವೀಕೃತವಾಗಿರುವುದಿಲ್ಲವೆಂದು ತಿಳಿಸಿ, ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವಂತೆ ಕೋರಿರುತ್ತಾರೆ.

......5

1850966/2020/O/o COMM-AYUSH

-4-

ಆದ್ದರಿಂದ, ಆಯುಷ್ ಇಲಾಖೆಯ ಸಹಾಯಕ ಔಷಧ ನಿಯಂತ್ರಕರು ಹಾಗೂ ಉಪ ಔಷಧ ನಿಯಂತ್ರಕರು ವೃಂದದ ದಿನಾಂಕ:19.04.2012 ಹಾಗೂ ದಿ:07.04.2016 ರಿಂದ ದಿನಾಂಕ:31.12.2019ರ ಅವಧಿಗೆ ದಿನಾಂಕ: 01.01.2020 ರಲ್ಲಿರುವಂತೆ, ಅಂತಿಮ ಜೇಷ್ಠತಾ ಪಟ್ಟಿಯನ್ನು ಅನುಬಂಧಧಲ್ಲಿರುವಂತೆ ಪ್ರಕಟಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಎಸ್. ನಾಗರಾಜ್)
ಸರ್ಕಾರದ ಉಪ ಕಾರ್ಯದರ್ಶಿ-3
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಇವರಿಗೆ,

ಸಂಕಲನಾಕಾರರು, ಕರ್ನಾಟಕ ರಾಜ್ಯಪತ್ರಗಾರ ಇಲಾಖೆ, ಬೆಂಗಳೂರು - ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಈ ಇಲಾಖೆಗೆ 25 ಪ್ರತಿಗಳನ್ನು ಒದಗಿಸಲು ಕೋರಿದೆ.

ಪ್ರತಿಗಳು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ವಿಧಾನ ಸೌಧ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಜಿ&ಎಸ್.ಎಸ್.ಎ) /(ಇ&ಆರ್.ಎಸ್.ಎ), ಕರ್ನಾಟಕ, ಹೊಸಕಟ್ಟಡ,'ಆಡಿಟ್ ಭವನ', ಅಂಚೆಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560 001.

......6

3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560 001.
4. ಆಯುಕ್ತರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು.
5. ಸಂಬಂಧಿಸಿದ ಅಧಿಕಾರಿಗಳಿಗೆ (ಆಯುಷ್ ಆಯುಕ್ತರ ಮುಖಾಂತರ)
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
7. ಸರ್ಕಾರದ ಉಪ ಕಾರ್ಯದರ್ಶಿ-3 ರವರ ಆಪ್ತ ಸಹಾಯಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
8. ಶಾಖಾ ರಕ್ಷ ಕಡತ /ಹೆಚ್ಚುವರಿ ಪ್ರತಿ.

**ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 52 ಪಿಐಎಂ 2020, ದಿನಾಂಕ:20.10.2020ಕ್ಕೆ ಅನುಬಂಧ**

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 186 ಎಸ್‌ಆರ್‌ಎಸ್ 2018, ದಿನಾಂಕ: 27.02.2019 ಮತ್ತು 15.05.2019 ರ ಆದೇಶದಂತೆ,**

**ಆಯುಷ್ ಇಲಾಖೆಯ ಸಹಾಯಕ ಔಷಧ ನಿಯಂತ್ರಕರು ವೃಂದದವರ ದಿನಾಂಕ:19.04.2012ರಿಂದ ದಿನಾಂಕ: 01.01.2020ರ ಅವಧಿಗೆ**

**ಅಂತಿಮ ಜೇಷ್ಠತಾ ಪಟ್ಟಿ.**

| ಕ್ರ. ಸಂ | ಅಧಿಕಾರಿಯ ಹೆಸರು | ನೇರ ನೇಮಕಾತಿ /ಮುಂಬಡ್ತಿ /ಇತರೆ | ಮೀಸಲಾತಿ ವರ್ಗ | ಜನ್ಮ ದಿನಾಂಕ | ಸರ್ಕಾರಿ ಸೇವೆಗೆ ಸೇರಿದ ದಿನಾಂಕ | ಪದೋನ್ನತಿ ಹೊಂದಿದ ದಿನಾಂಕ | ಜೇಷ್ಠತೆಗೆ /ನೇರ ನೇಮಕಾತಿಗೆ ಅರ್ಹ ದಿನಾಂಕ | ಷರಾ |
|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 |
| 1 | ಡಾ॥ ಹಾಂಕೆಪ್ಪ ಯ.ರಾಥೋಡ್ | ಮುಂಬಡ್ತಿ | ಪ.ಜಾತಿ | 01.06.1975 | 21.08.2004 | 04.12.2012 | 04.12.2012 | - |

(ಬಿ.ಎಸ್. ನಾಗರಾಜ್)
ಸರ್ಕಾರದ ಉಪ ಕಾರ್ಯದರ್ಶಿ-3
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

**ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 52 ಪಿಐಎಂ 2020, ದಿನಾಂಕ:20.10.2020ಕ್ಕೆ ಅನುಬಂಧ**

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 186 ಎಸ್ಆರ್ಎಸ್ 2018, ದಿನಾಂಕ: 27.02.2019 ಮತ್ತು 15.05.2019 ರ ಆದೇಶದಂತೆ, ಆಯುಷ್ ಇಲಾಖೆಯ ಉಪ ಔಷಧ ನಿಯಂತ್ರಕರು ವೃಂದದವರ ದಿನಾಂಕ: 07.04.2016ರಿಂದ ದಿ: 01.01.2020ರ ಅವಧಿಗೆ ಅಂತಿಮ ಜೇಷ್ಠತಾ ಪಟ್ಟಿ.**

| ಕ್ರ. ಸಂ | ಅಧಿಕಾರಿಯ ಹೆಸರು | ನೇರ ನೇಮಕಾತಿ /ಮುಂಬಡ್ತಿ /ಇತರೆ | ಮೀಸಲಾತಿ ವರ್ಗ | ಜನ್ಮ ದಿನಾಂಕ | ಸರ್ಕಾರಿ ಸೇವೆಗೆ ಸೇರಿದ ದಿನಾಂಕ | ಪದೋನ್ನತಿ ಹೊಂದಿದ ದಿನಾಂಕ | ಜೇಷ್ಠತೆಗೆ /ನೇರ ನೇಮಕಾತಿಗೆ ಅರ್ಹ ದಿನಾಂಕ | ಷರಾ |
|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 |
| 1 | ಡಾ॥ ಹಾಂಕೆಪ್ಪ ಯ.ರಾಥೋಡ್ | ಮುಂಬಡ್ತಿ | ಪ.ಜಾತಿ | 01.06.1975 | 21.08.2004 | 29.04.2016 | 29.04.2016 | ಸರ್ಕಾರದ ಆದೇಶ ಸಂಖ್ಯೆ:ಆಕುಕ 105 ಪಿಐಎಂ 2016, ದಿನಾಂಕ: 07.04.2016ರನ್ವಯ ಕಾರ್ಯಕಾರಿ ಆದೇಶದ ಮೂಲಕ ನೇಮಕಾತಿ ವಿಧಾನವನ್ನು ನಿಗದಿಪಡಿಸಿ ಆದೇಶಿಸಲಾಗಿದ್ದು, ನೇಮಕಾತಿ ವಿಧಾನವನ್ನು ಆಯುಷ್ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡಿ ಅಳವಡಿಸುವ ಷರತ್ತಿಗೊಳಪಟ್ಟಿದೆ. |

(ಬಿ.ಎಸ್. ನಾಗರಾಜ್)
ಸರ್ಕಾರದ ಉಪ ಕಾರ್ಯದರ್ಶಿ-3
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

1850966/2020/O/o COMM-AYUSH